69

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವ್ಹಿ.ಸಂಕನೂರ ಇವರ ನಿಯಮ 330ರಡಿ ಗಮನ ಸೆಳೆಯುವ ಸೂಚನೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆ**

**ಪ್ರಶ್ನೆ :**

ಕರ್ನಾಟಕ ಏಕೀಕರಣಕ್ಕಾಗಿ ಹೋರಾಟ ಮಾಡಿದ ಹಾಗೂ ಸರಕಾರದ ಅನುದಾನಕ್ಕೆ ಒಳಪಟ್ಟಿರುವ "ಕರ್ನಾಟಕ ವಿದ್ಯಾವರ್ಧಕ ಸಂಘ" ಧಾರವಾಡ ಇದರ 6 ಜನ ಖಾಯಂ ಸಿಬ್ಬಂದಿಗಳು ಪಿಂಚಣಿ ಹಾಗೂ ಇತರ ಸೌಲಭ್ಯಗಳಿಂದ ವಂಚಿತರಾಗಿದ್ದನ್ನು ಸರಿಪಡಿಸಲು ಸರ್ಕಾರದ ಆದೇಶ ಸಂಖ್ಯೆ: ಸಂಕಇ 327 ಕಸಧ 98, ಬೆಂಗಳೂರು, ದಿನಾಂಕ:28.08.2000 ಅನ್ವಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವ ಕುರಿತು ಪ್ರಸ್ತಾಪಿಸುವುದು.

******

**ಉತ್ತರ :**

ಸರ್ಕಾರದ ಆದೇಶ ಸಂಖ್ಯೆ: ಸಂಕಇ 327 ಕಸಧ 98, ದಿನಾಂಕ:28.08.2000ರಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘ, ಧಾರವಾಡ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 6 ಜನ ಸಿಬ್ಬಂದಿಯನ್ನು ಶಾಶ್ವತ ಅನುದಾನ ಸಂಹಿತೆಗೆ ಒಳಪಡಿಸಿ ಆದೇಶಿಸಲಾಗಿರುತ್ತದೆ. ಅದರನ್ವಯ ಸರ್ಕಾರದ ಆದೇಶ ಸಂಖ್ಯೆ: ಕಸಂವಾ 182 ಕಸನಿ 2012, ದಿನಾಂಕ:09.05.2014ರಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘ, ಧಾರವಾಡ ಈ ಸಂಸ್ಥೆಯ 6 ವಿವಿಧ ವೃಂದಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳು-2014 ಅನ್ನು ರಚಿಸಿ ಆದೇಶಿಸಿದೆ.

ಕರ್ನಾಟಕ ವಿದ್ಯಾವರ್ಧಕ ಸಂಘ, ಧಾರವಾಡ ಈ ಸಂಸ್ಥೆಯು ಒಂದು ನೋಂದಾಯಿತ ಸಂಸ್ಥೆಯಾಗಿರುವುದರಿಂದ, ಅಲ್ಲಿನ ಸಿಬ್ಬಂದಿಗಳು ಸರ್ಕಾರಿ ನೌಕರರಾಗಿರುವುದಿಲ್ಲ. ಆದ್ದರಿಂದ ಸದರಿ ಸಂಸ್ಥೆಯ ಸಿಬ್ಬಂದಿಗಳಿಗೆ ನಿವೃತ್ತಿ ಸೌಲಭ್ಯಗಳನ್ನು ವಿಸ್ತರಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಎಂದು ಸರ್ಕಾರದ ಆದೇಶ ಸಂಖ್ಯೆ: ಕಸಂವಾ 102 ಕಸನಿ 2014, ದಿನಾಂಕ:06.03.2015ರಲ್ಲಿ ತಿಳಿಸಲಾಗಿರುತ್ತದೆ.

ಮುಂದುವರೆದು, ಆರ್ಥಿಕ ಇಲಾಖೆಯು ಕರ್ನಾಟಕ ವಿದ್ಯಾವರ್ಧಕ ಸಂಘ, ಧಾರವಾಡ ಈ ಸಂಸ್ಥೆಯ ಸಿಬ್ಬಂದಿಗಳನ್ನು ಅನುದಾನ ಸಂಹಿತೆಗೆ ಒಳಪಡಿಸಿ, ಪಿಂಚಣಿ ಮತ್ತು ಇತರೆ ಸೌಲಭ್ಯಗಳನ್ನು ನೀಡುವ ಕುರಿತಾದ ಪ್ರಸ್ತಾವನೆಗೆ "ಈ 6 ಜನ ಖಾಯಂ ಸಿಬ್ಬಂದಿಗಳಿಗೆ ನಿವೃತ್ತಿ ವೇತನ ಮಂಜೂರು ಮಾಡಲು ಸಾಧ್ಯವಿಲ್ಲ" ಎಂದು ಅಭಿಪ್ರಾಯ ನೀಡಿರುತ್ತದೆ. ಅದರಂತೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ದಿನಾಂಕ:01.07.2022ರಂದು ಪ್ರಧಾನ ಕಾರ್ಯದರ್ಶಿ, ಕರ್ನಾಟಕ ವಿದ್ಯಾವರ್ಧಕ ಸಂಘ, ಧಾರವಾಡ ಇವರಿಗೆ ಹಿಂಬರಹ ನೀಡಿರುತ್ತಾರೆ.

**ಕಸಂವಾ 39 ಕಸನಿ ಆಕ 2023**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು